# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವೃತ್ತಿ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಕುರಿತು.

ಓದಲಾಗಿದೆ : 1 ಸರ್ಕಾರದ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016 ದಿನಾಂಕ:15.04.2016.

2 ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ:ಸಿ4(3) ಪ್ರೌ.ವೇ.ಶಾ.12/2014-15 ದಿನಾಂಕ:01.08.2016.

** ** **

ಪ್ರಸ್ತಾವನೆ:

kpeta.weebly.com

ಮೇಲೆ ಓದಲಾದ ಕ್ರಮಾಂಕ[1] ಸರ್ಕಾರದ ಆದೇಶದಲ್ಲಿ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಮುಖ್ಯ ಶಿಕ್ಷಕರು ಮತ್ತು ಸಹ ಶಿಕ್ಷಕರುಗಳಿಗೆ ಜೂನ್ 2016ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದ್ದು, ಕ್ರಮಾಂಕ[2]ರ ಪ್ರಸ್ತಾವನೆಯಲ್ಲಿ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವೃತ್ತಿ ಶಿಕ್ಷಕರುಗಳಿಗೆ ಈ ಸೌಲಭ್ಯವನ್ನು ವಿಸ್ತರಿಸುವ ಕುರಿತು ನಿರ್ದೇಶಕರು(ಪ್ರೌಢಶಿಕ್ಷಣ) ರವರು ಮಾರ್ಗದರ್ಶನ ಕೋರಿರುವ ಹಾಗೂ ಈ ಸಂಬಂಧ ಸರ್ಕಾರದಲ್ಲಿ ವಿವಿಧ ಸಂಘ ಸಂಸ್ಥೆಗಳಿಂದ ಸ್ವೀಕೃತಗೊಂಡಿರುವ ಮನವಿಗಳನ್ನು ಪರಿಶೀಲಿಸಿ, ಈ ಸೌಲಭ್ಯವನ್ನು ಸರ್ಕಾರಿ/ಅನುದಾನಿತ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವೃತ್ತಿ ಶಿಕ್ಷಕರುಗಳಿಗೂ ವಿಸ್ತರಿಸುವಂತೆ ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ :ಇಡಿ 78 ಎಸ್‌ಎಲ್‌ಬಿ 2016,**
**ಬೆಂಗಳೂರು ದಿನಾಂಕ :03.03.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ಹಾಗೂ ಸಂಯುಕ್ತ ಪದವಿ ಪೂರ್ವ ಕಾಲೇಜಿನ (ಪ್ರೌಢಶಾಲಾ) ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪಪ್ರಾಂಶುಪಾಲರು, ದೈಹಿಕ ಶಿಕ್ಷಣ ಶಿಕ್ಷಕರು ಮತ್ತು ವೃತ್ತಿ ಶಿಕ್ಷಕರುಗಳಿಗೆ ಹಾಗೂ

ಸಾರ್ವಜನಿಕ ಶಿಕ್ಷಣ ಇಲಾಖೆಯ ಡಯಟ್, ಉಪ ನಿರ್ದೇಶಕರ/ಕ್ಷೇತ್ರ ಶಿಕ್ಷಣಾಧಿಕಾರಿ, ಮುಂತಾದ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮುಖ್ಯ ಶಿಕ್ಷಕರು/ತತ್ಸಮಾನ ಹಾಗೂ ವಿಷಯ ಶಿಕ್ಷಕರು/ತತ್ಸಮಾನ ಹುದ್ದೆಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಸೌಲಭ್ಯವನ್ನು ದಿನಾಂಕ:01-06-2016 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ.

2021-9-7 22:19

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

kpeta.weebly.com

Rajyashree. V. T
[ ವಿ.ಟಿ.ರಾಜ್ಯಶ್ರೀ ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.(ಪ್ರೌಢಶಿಕ್ಷಣ)

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು, ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಸರಬರಾಜು ಮಾಡಲು.

ಪ್ರತಿ :

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
5. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ.
8. ಎಲ್ಲಾ ಉಪನಿರ್ದೇಶಕರುಗಳಿಗೆ/ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯುಕ್ತರು/ಅಪರ ಆಯುಕ್ತರ ಮುಖೇನ)
9. ಕರ್ನಾಟಕ ರಾಜ್ಯ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳ ಸಂಘ(ರಿ), ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.